# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** ಶ್ರೀ ಬಸವರಾಜಯ್ಯ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ (ಪ್ರಸ್ತುತ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ವಿಭಾಗ, ಚಿಕ್ಕಬಳ್ಳಾಪುರ) ಮತ್ತು ಶ್ರೀ ನಂಜುಂಡೇಗೌಡ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ಬಗ್ಗೆ.

**ಓದಲಾಗಿದೆ:–** ಉಪ ನಿಬಂಧಕರು, ವಿಚಾರಣೆಗಳು–1. ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೇಂಟ್ /ಉಪಲೋಕ್ /ಬಿಡಿ–155/2011/ ಡಿಆರ್ಇ–1 ದಿನಾಂಕ 27–06–2013.

-----

**ಪ್ರಸ್ತಾವನೆ**

ಉಪ ನಿಬಂಧಕರು, ವಿಚಾರಣೆಗಳು–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಓದಲಾದ ದಿನಾಂಕ 27–06–2013ರ ಪತ್ರದಲ್ಲಿ ಶ್ರೀ ನಂಜುಂಡೇಗೌಡ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ ಮತ್ತು ಶ್ರೀ ಬಸವರಾಜಯ್ಯ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ ( ಪ್ರಸ್ತುತ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ವಿಭಾಗ, ಚಿಕ್ಕಬಳ್ಳಾಪುರ) ಇವರ ವಿರುದ್ಧ ತನಿಖೆ ಕೈಗೊಂಡು, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸಿನಂತೆ ಕ್ರಮವಹಿಸುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12 (4)ರನ್ವಯ ಲೋಕಾಯುಕ್ತ ಸಂಸ್ಥೆಗೆ ವರದಿ ಮಾಡಬೇಕೆಂದು ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ದಿನಾಂಕ 21–06–2013 ಸಂಖ್ಯೆ Compt/Uplok/BD-155/2011 /DRE- ರ ವರದಿಯಲ್ಲಿ ಶ್ರೀ ಡಿ.ಆರ್. ಸುಂದರೇಶ್, ದೊಡ್ಡಗಂಗವಾಡಿ ಗ್ರಾಮ, ಕೂಟಗಲ್ ಹೋಬಳಿ, ರಾಮನಗರ ತಾಲ್ಲೂಕು ಇವರು ಮಾನ್ಯ ಉಪ ಲೋಕಾಯುಕ್ತರಿಗೆ ದೂರು ಮನವಿ ಸಲ್ಲಿಸಿ, 2006–07 ಮತ್ತು 2008–09ನೇ ಸಾಲಿನಲ್ಲಿ ಗ್ರಾಮೀಣ ರೋಜಗಾರ್ ಯೋಜನೆಯಡಿಯಲ್ಲಿ ದೊಡ್ಡಗಂಗವಾಡಿ ಗ್ರಾಮ ಪಂಚಾಯತಿಯಲ್ಲಿ ಕೈಗೊಳ್ಳಲಾದ ಕಾಮಗಾರಿಗಳಲ್ಲಿ ಅವ್ಯವಹಾರ ನಡೆದಿರುವುದರಿಂದ ತಪ್ಪಿತಸ್ಥರ ವಿರುದ್ಧ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಕೋರಿದ್ದರ ಮೇರೆಗೆ, ಮುಖ್ಯ ಇಂಜಿನಿಯರ್, TAC, ಕರ್ನಾಟಕ ಲೋಕಾಯುಕ್ತ ಕಚೇರಿ ರವರು ಕೈಗೊಂಡ ತನಿಖೆಯಲ್ಲಿ, ಶ್ರೀ ಬಸವರಾಜಯ್ಯ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ (ಪ್ರಸ್ತುತ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ವಿಭಾಗ, ಚಿಕ್ಕಬಳ್ಳಾಪುರ) ಮತ್ತು ಶ್ರೀ ನಂಜುಂಡೇಗೌಡ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ ಇವರುಗಳು ಸರ್ಕಾರದ ಅನುದಾನ ದುರುಪಯೋಗಪಡಿಸಿಕೊಂಡು ಕ.ನಾ.ಸೇ. (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ

---2

ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಸದರಿಯವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14 (ಎ) ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಬೇಕೆಂದು ಶಿಫಾರಸ್ಸು ಮಾಡಿದ್ದಾರೆ.

ಮಾನ್ಯ ಕರ್ನಾಟಕ ಉಪ ಲೋಕಾಯುಕ್ತರ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಬಸವರಾಜಯ್ಯ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ (ಪ್ರಸ್ತುತ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ವಿಭಾಗ, ಚಿಕ್ಕಬಳ್ಳಾಪುರ) ಮತ್ತು ಶ್ರೀ ನಂಜುಂಡೇಗೌಡ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ ಇವರುಗಳು ಸರ್ಕಾರದ ಅನುದಾನ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆಂದು ವರದಿ ಮಾಡಿರುವ ಹಿನ್ನೆಲೆಯಲ್ಲಿ, ಸದರಿ ಆಪಾದಿತ ಅಧಿಕಾರಿ / ನೌಕರರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ ಗ್ರಾಅಪ 15 ಇಎನ್‌ಕ್ಯೂ 2013 ಬೆಂಗಳೂರು ದಿನಾಂಕ 20-07-2013</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಬಸವರಾಜಯ್ಯ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ (ಪ್ರಸ್ತುತ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ವಿಭಾಗ, ಚಿಕ್ಕಬಳ್ಳಾಪುರ) ಮತ್ತು ಶ್ರೀ ನಂಜುಂಡೇಗೌಡ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ ಇವರುಗಳು ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ರ ಪ್ರಕಾರ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಕರ್ನಾಟಕ ಉಪ ಲೋಕಾಯುಕ್ತರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಚಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ
ಸಂಕಲನಕಾರರು,ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿ;
1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪ ಲೋಕಾಯುಕ್ತ-2, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಉಪ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.

---3

7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ.
9. ಶ್ರೀ ಬಸವರಾಜಯ್ಯ, ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ವಿಭಾಗ, ಚಿಕ್ಕಬಳ್ಳಾಪುರ.
10. ಶ್ರೀ ನಂಜುಂಡೇಗೌಡ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಮನಗರ
11. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
12. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್